# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 462 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 15.09.2022 |
| ಉತ್ತರಿಸಬೇಕಾದ ಸಚಿವರು | : | ಮುಖ್ಯಮಂತ್ರಿಯವರು |

****

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಯೋಜನಾ ವ್ಯಾಪ್ತಿಯ ಹಾಗೂ ಆಡಳಿತಾತ್ಮಕ ವ್ಯಾಪ್ತಿಯ ಒಟ್ಟು ವಿಸ್ತೀರ್ಣವೆಷ್ಟು; (ವಿವರಗಳನ್ನು ನೀಡುವುದು). | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯು 1227.49 ಚ.ಕಿ.ಮೀ ಆಗಿರುತ್ತದೆ. |
| ಆ | ಕಳೆದ ಮೂರು ವರ್ಷಗಳಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ (ಬಿಡಿಎ) ವತಿಯಿಂದ ಕೈಗೊಂಡ ಯೋಜನೆಗಳ ಮತ್ತು ಹೊಸ ಬಡಾವಣೆಗಳ ನಿರ್ಮಾಣದ ಯೋಜನೆಗಳ ಪ್ರಾರಂಭಿಕ ವರ್ಷ ಮತ್ತು ಮುಕ್ತಾಯದ ವರ್ಷಗಳ ವಿವರ ಮತ್ತು ಯೋಜನೆಗಳ ಪ್ರಸ್ತುತ ಸ್ಥಿತಿಗಳೇನು (ವಿವರ ನೀಡುವುದು). | ಕಳೆದ ಮೂರು ವರ್ಷಗಳಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಯಾವುದೇ ಹೊಸ ಯೋಜನೆ ಹಾಗೂ ಹೊಸ ಬಡಾವಣೆಗಳನ್ನು ಕೈಗೊಂಡಿರುವುದಿಲ್ಲ. |
| ಇ | ಭವಿಷ್ಯದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ(ಬಿಡಿಎ) ವತಿಯಿಂದ ಕೈಗೊಳ್ಳಲು ಉದ್ದೇಶಿಸಿರುವ ನೂತನ ಯೋಜನೆಗಳಾವುವು: (ವಿವರ ನೀಡುವುದು). | ಪ್ರಸ್ತುತ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಯಾವುದೇ ನೂತನ ಯೋಜನೆಗಳ ಪ್ರಸ್ತಾವನೆ ಇರುವುದಿಲ್ಲ. |
| ಈ | ಪ್ರಸ್ತುತ ಇರುವ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ(ಬಿಡಿಎ) ಆಡಳಿತಾತ್ಮಕ ವ್ಯಾಪ್ತಿಯನ್ನು ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು). | ಪ್ರಸ್ತುತ ಇರುವ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯನ್ನು ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

**ಸಂಖ್ಯೆ: ನಅಇ 322 ಬೆಂಭೂಸ್ವಾ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ